67

ಕಂದಾಯ ಇಲಾಖೆ

Wef 19-11-2007

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ

ಕರ್ನಾಟಕ ಸರ್ಕಾರದ ನಡವಳಿಗಳು

## ಕಂದಾಯ ಸಚಿವಾಲಯ

ವಿಷಯ: 2007-08ನೇ ಸಾಲಿನಿಂದ ಇಂದಿರಾ ಗಾಂಧಿ ರಾಷ್ಟೀಯ ವೃದ್ಧಪ್ಯ ವೇತನ ಅಡಿಯಲ್ಲಿ ಮಾಸಾಶನ ಮಂಜೂರು ಮಾಡುವ ಬಗ್ಗೆ

ಓದಲಾಗಿದೆ : ಕಾಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಭಾರತ ಸರ್ಕಾರ ಇವರ ಪತ್ರ ಸಂಖ್ಯೆ ,#J-11013/I/2007-NSAP ದಿನಾಂಕ : 23-09-2007.

### ಪ್ರಸ್ತಾವನೆ

ಭಾರತ ಸರ್ಕಾರದ, ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆಯನ್ನು ಈ ಮೊದಲು ಚಾಲ್ತಿಯಲ್ಲಿದ್ದ ರಾಷ್ಟ್ರೀಯ ವೃದ್ಧಾಪ್ಯ ವೇತನದ ನಿಯಮಗಳನ್ನು ಬದಲಿಸಿ ದಿನಾಂಕ ; 19/11/07 ರಿಂದ ಜಾರಿಗೆ ತಂದಿದೆ. ಇದರಂತೆ ಫಲಾನುಭವಿಗಳು 65 ವರ್ಷ ಹಾಗೂ ಮೇಲ್ಪಟ್ಟ ವಯಸ್ಸುಳ್ಳವರಾಗಿರಬೇಕು ಹಾಗೂ ಅವರ ಆರ್ಥಿಕ ಸ್ಥಿತಿ ಬಡತನ ರೇಖೆಗಿಂತ ಕೆಳಗಿರಬೇಕು. ಬಡತನ ರೇಖೆಗಿಂತ ಕೆಳಗಿರುವ ಫಲಾನುಭವಿಗಳನ್ನು ಗುರುತಿಸುವ ಮಾನದಂಡವನ್ನು 2002ರಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿ ರಾಜ್ ಇಲಾಖೆಯು ನಡೆಸಿದ ಸಮೀಕ್ಷೆಯಂತೆ ನಿಗದಿ ಪಡಿಸಲು ಕೋರಿರುತ್ತಾರೆ. ಈ ಯೋಜನೆ ಅನ್ವಯ ಮಾಸಿಕ ರೂ. 400.00 (ರೂಪಾಯಿ ನಾಲ್ಕು ನೂರುಗಳು ಮಾತ್ರಗಳ ಸಾಮಾಜಿಕ ಭದ್ರತಾ ವೇತನವನ್ನು ನೀಡಲು ಘೋಷಿಸುತ್ತಾರೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂ. ಕಂ. ಇ. 147 ಎಮ್‌ಎಸ್‌ಟಿ 2007 ಬೆಂಗಳೂರು. ದಿನಾಂಕ : 01.12.2007

ರಾಜ್ಯದಲ್ಲಿನ 65 ವರ್ಷಕ್ಕಿಂತ ಮೇಲ್ಪಟ್ಟ ಬಡತನ ರೇಖೆಗಿಂತ ಕೆಳಗಿರುವ ಹಿರಿಯ ಜೀವಗಳಿಗೆ ಅವರ ಬಾಳಿನ ಮುಸ್ಸಂಜೆಯಲ್ಲಿ ಅರ್ಥಿಕ ನೆರವು ನೀಡಿ ಸಮಾಜದ ಮುಖ್ಯ ವಾಹಿನಿಗೆ ತರಲು ಸಾಮಾಜಿಕ ಭದ್ರತ ವೇತನವನ್ನು ನೀಡುವ ಯೋಜನೆಗೆ ಸರ್ಕಾರ ಮಂಜೂರಾತಿ ನೀಡಿದೆ.

ಈ ಕೆಳಕಂಡ ವ್ಯಕ್ತಿಗಳು ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆಯಲ್ಲಿ ಮಾಸಾಶನ ಪಡೆಯಲು ಅರ್ಹರಾಗಿರುತ್ತಾರೆ.

1. 65 ವರ್ಷಕ್ಕಿಂತ ಅಥವಾ ಅದಕ್ಕಿಂತ ಮೇಲ್ಪಟ್ಟ ವ್ಯಕ್ತಿಗಳು (ಗಂಡು ಅಥವಾ ಹೆಣ್ಣು)
2. ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿ ರಾಜ್ ಮಂತ್ರಾಲಯವು, ಬಡತನ ರೇಖೆಗಿಂತ ಕೆಳಗಿರುವವರನ್ನು ಗುರುತಿಸಲು ಕುಟುಂಬದ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗತಿಗಳ ಬಗ್ಗೆ 13 ಅಂಶಗಳನ್ನು ನಿಗದಿಪಡಿಸಿದೆ. ಪ್ರತಿಯೊಂದು ಅಂಶಕ್ಕೆ 0-4 ಅಂಕಗಳನ್ನು ನಿಗದಿಪಡಿಸಲಾಗಿದೆ. ಅದರಂತೆ 26 ಅಂಕಗಳು ಅಥವಾ ಆದಕ್ಕಿಂತ ಕಡಿಮೆ ಅಂಶಗಳನ್ನು ಪಡೆದ ಕುಟುಂಬಗಳನ್ನು ಬಡತನದ ರೇಖೆಗಿಂತ ಕೆಳಗಿದೆ ಎಂದು ಪರಿಗಣಿಸಲಾಗುವುದು.
3. ಅಂತಹ ವ್ಯಕ್ತಿಯು ವಿಧವ ವೇತನ, ಅಂಗವಿಕಲ ವೇತನ, ಸಂಧ್ಯಾ ಸುರಕ್ಷಾ ಯೋಜನೆಯಡಿ ಯಾವುದೇ ತರಹದ ಪಿಂಚಣಿ ಇತ್ಯಾದಿಗಳನ್ನು ಸಾರ್ವಜನಿಕ ಅಥವಾ ಖಾಸಗಿ ಮೂಲಗಳಿಂದ ಪಡೆಯುತ್ತಿರಬಾರದು.
4. ಈ ಯೋಜನೆಯು 19ನೇ ನವೆಂಬರ್ 2007ರಿಂದ ಜಾರಿಗೆ ಬಂದಿದೆ. ಇಂದಿರಾ ಗಾಂಧಿ ರಾಷ್ಟ್ರಿಯ ವೃದ್ಧಾಪ್ಯ ವೇತನದಡಿಯಲ್ಲಿ ಮಾಸಾಶನಕ್ಕಾಗಿ ಸಲ್ಲಿಸುವ ಅರ್ಜಿಯು ಗೊತ್ತುಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಗೆ ಸಲ್ಲಿಸತಕ್ಕದ್ದು.
5. ಫಲಾನುಭವಿಗಳಿಗೆ ಗಂಡು ಮಕ್ಕಳು ಇದ್ದರು ಸಹ ಅವರುಗಳು ಫಲಾನುಭವಿಗಳನ್ನು ಪೋಷಿಸದೇ ಇದ್ದಲ್ಲಿ ಇವರು ಮಾಸಾಶನ ಪಡೆಯಲು ಅರ್ಹರಾಗಿರುತ್ತಾರೆ.